**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ.**

**<u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 166/2020</u>**

**ಚಾ.ಸಾ-3**

**ಪ್ರಾ.ಸಾ-5**

**ಸಾಕ್ಷಿಗೆ ದಿನಾಂಕ 06-08-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಬಸವರಾಜ |
| ತಂದೆಯ ಹೆಸರು | ಃ | ಸೈದಪ್ಪ |
| ವಯಸ್ಸು | ಃ | 35 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಇಜೇರಿ |

**<u>ಮುಖ್ಯ ವಿಚಾರಣೆಃ  ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ನ್ಯಾಯಲಯದ ಮುಂದಿರುವ ಆರೋಪಿತರು ಗೊತ್ತು. ಚಾಸಾ-1 ಮತ್ತು 2 ನನಗೆ ಗೊತ್ತು. ನನಗೆ ಪ್ರಕರಣದ ಬಗ್ಗೆ ಗೊತ್ತಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ಪೊಲೀಸರು ನನ್ನ ಸಮಕ್ಷಮ ಪಂಚನಾಮೆ ಮಾಡಿ ಯಾವುದೇ ವಸ್ತುವನ್ನು ಜಪ್ತಿಪಡಿಸಿಕೊಂಡಿಲ್ಲ.

ಸಾಕ್ಷಿಗೆ ಸ್ಥಳ ಪಂಚನಾಮೆಎಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಗುನ್ನ ಸ್ಥಳ ಪಂಚನಾಮಯನ್ನು ನಿಪಿ-5 ಎಂದು ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಪಂಚನಾಮೆಯಲಿ ಬರೆದಿರುವ ವಿಚಾರ ಗೊತ್ತಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿಃ 06-04-2020 ರಂದು ಬೆಳಿಗ್ಗೆ 10 ರಿಂದ 11 ಗಂಟೆ ಸಮಯದಲ್ಲಿ ಚಾಸಾ-1 ರವರು ತೋರಿಸಿದಂತಹ ಜಾಗದಲ್ಲಿ ನಿಮ್ಮ ಮತ್ತು ಚಾಸಾ-2 ರವರ ಸಮಕ್ಷಮ ನಿಪಿ-5 ರಂತೆ ಪಂಚನಾಮೆಯನ್ನು ಜರುಗಿಸಿರುತ್ತಾರೆಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಜಗಳದ ವಿಚಾರವಾಗಿ ಮಾಡಿರುತ್ತಾರೆ ಎಂದರೆ ಸಹಿ ಮಾಡಲು ಹೇಳಿದ್ದರಿಂದ ಸಹಿ ಮಾಡಿದ್ದೇನೆಂದು ಉತ್ತರಿಸುತ್ತಾರೆ. ಪಂಚನಾಮೆ ಮಾಡುವ ಸಮಯದಲ್ಲಿ 2 ಬಡಿಗೆಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನಿಮಗೆ ಪ್ರಕರಣದ ಎಲ್ಲ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲೆಂದು ಈ ರೀತಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿತರ ಪರ ವಕೀಲರಿಂದ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ